<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ರವರ ನ್ಯಾಯಾಲಯ, ನಂಜನಗೂಡು</u>

<u>ಸಿಸಿ ಸಂಖ್ಯೆ: 1243/2021</u>

ಫಿರ್ಯಾದಿ : ಸರ್ಕಾರದ ಪರವಾಗಿ ಆರಕ್ಷಕ ಉಪ-ನಿರೀಕ್ಷಕರು,
ಹುಲ್ಲಹಳ್ಳಿ ಪೊಲೀಸ್ ಠಾಣೆ, ನಂಜನಗೂಡು.

**ವಿರುದ್ಧ**

ಆರೋಪಿತರು : ಶ್ರೀ ಶಿವಶಂಕರ ಮತ್ತು ಇತರರು

:: <u>ದೋಷಾರೋಪಣೆ</u> ::

**ಶ್ರೀ ಸತೀಶ ಕೆ.ಜಿ., ಬಿ.ಎ., ಎಲ್.ಎಲ್.ಬಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ನಂಜನಗೂಡು ಆದ ನಾನು ಆರೋಪಿತರಾದ-

1) ಶ್ರೀ ಶಿವಶಂಕರ ಎಸ್ ಬಿನ್ ಸೋಮಪ್ಪ
ವಯಸ್ಸು ಸುಮಾರು 28 ವರ್ಷ,

2) ಶ್ರೀ ಸೋಮಪ್ಪ ಬಿನ್ ಲೇಟ್ ಸಂಗಪ್ಪ ,
ವಯಸ್ಸು ಸುಮಾರು 80 ವರ್ಷ,

3) ಶ್ರೀಮತಿ ಭಾಗ್ಯಮ್ಮ ಕೋಂ ಸೋಮಪ್ಪ
ವಯಸ್ಸು ಸುಮಾರು 65 ವರ್ಷ,

ಮಾದನಹಳ್ಳಿ ಗ್ರಾಮ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ ನಿವಾಸಿಗಳಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ-

ನಂಜನಗೂಡು ತಾಲ್ಲೂಕು, ಹುಲ್ಲಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಮಾದನಹಳ್ಳಿ ಗ್ರಾಮದಲ್ಲಿ ವಾಸವಿರುವ 1ನೇ ಆರೋಪಿಯಾದ ನಿಮಗು ಮತ್ತು ಚಾಸಾ-1-ಶ್ರೀಮತಿ ರಕ್ಷಿತಾರವರಿಗು ದಿನಾಂಕ 21.05.2018ರಂದು ಮದುವೆಯಾಗಿದ್ದು, ಮದುವೆಯ ನಂತರ ಚಾಸಾ-1 ರವರು ಮಾದನಹಳ್ಳಿ ಗ್ರಾಮದ ನಿಮ್ಮ ಮನೆಯಲ್ಲಿ ವಾಸವಿದ್ದು, ಸುಮಾರು ಒಂದು ವರ್ಷದಿಂದ (ದೂರು ದಾಖಲು ಮಾಡಿದ ದಿನಾಂಕ 11.01.2021) ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರಿಗೆ ನೀನು ನಿನ್ನ ತಂದೆ ಮನೆಯಿಂದ ಆಸ್ತಿ ಮತ್ತು ಹಣವನ್ನು ತರಬೇಕೆಂದು ಮಾನಸಿಕವಾಗಿ ಮತ್ತು ದೈಹಿಕವಾಗಿ ಕಿರುಕುಳ ನೀಡಿದ್ದು, ಆ ಮೂಲಕ ಭಾರತೀಯ

ದಂಡ ಸಂಹಿತೆ ಕಲಂ 498-ಎ ಸಹವಾಚಕ 34 ಮತ್ತು ವರದಕ್ಷಿಣೆ ನಿಷೇಧ ಕಾಯ್ದೆ ಕಲಂ-3 ಮತ್ತು 4 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಎರಡನೆಯದಾಗಿ, ದಿನಾಂಕ 04.01.2021 ರಂದು ಸಂಜೆ ಸುಮಾರು 04.10 ಗಂಟೆ ಸಮಯದಲ್ಲಿ ಚಾಸಾ-1 ರವರು ಮಾದನಹಳ್ಳಿ ಎಲ್ಲೆಗೆ ಸೇರಿದ ಸರ್ವೆ ನಂಬರ್-68/01ರ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದಾಗ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು "ನೀನು ಹಣ ಮತ್ತು ಆಸ್ತಿ ತರದೇ ಇದ್ದರೆ ನಿನ್ನನ್ನು ಕೊಲೆ ಮಾಡುವುದಾಗಿ" ಜೀವ ಬೆದರಿಕೆ ಹಾಕಿದ್ದು, ಆ ಮೂಲಕ ಚಾಸಾ-1 ರವರು ಹೆದರುವಂತೆ ಮಾಡಿ ಅವರು ಕಾನೂನು ಸಮ್ಮತವಾಗಿ ಮಾಡಬೇಕಾಗಿರುವ ಕೃತ್ಯವನ್ನು ಮಾಡದಂತೆ ಅಥವಾ ಕಾನೂನು ಸಮ್ಮತವಾಗಿ ಮಾಡಬಾರದ ಕೃತ್ಯವನ್ನು ಮಾಡುವಂತೆ ಅಪಾಯದ ಭೀತಿಯನ್ನು ಹುಟ್ಟಿಸಿ ಅಪರಾಧಿಕ ಭಯೋತ್ಪಾದನೆಯನ್ನು ಉಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 506 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಮೂರನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 2 ಮತ್ತು 3 ನೇ ಆರೋಪಿಗಳಾದ ನೀವು ಚಾಸಾ-1 ರವರಿಗೆ ಅವಾಚ್ಯ ಶಬ್ಧಗಳಿಂದ ಬೈದಿದ್ದು, ಆ ಮೂಲಕ ಚಾಸಾ-1 ರವರಿಗೆ ಉದ್ರೇಕವನ್ನುಂಟು ಮಾಡಿದರೆ ಅಂತಹ ಉದ್ರೇಕದಿಂದ ಅವರು ಕುಪಿತರಾಗಿ ಶಾಂತಿ ಭಂಗವನ್ನುಂಟು ಮಾಡಲೆಂಬ ಅಥವಾ ಯಾವುದೇ ಅಪರಾಧವನ್ನು ಮಾಡಬೇಕೆಂಬ ಉದ್ದೇಶದಿಂದ ಅವರನ್ನು ಅವಮಾನ ಪಡಿಸಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ನಾಲ್ಕನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 1 ನೇ ಆರೋಪಿಯಾದ ನೀವು ಮಾರಕಾಯುಧವಾದ ಅಲ್ಲೇ ಮೆರಕಡ್ಡಿ (ಗ್ರಾಮೀಣ ಭಾಷೆಯಲ್ಲಿ ಒಕ್ಕಣೆ ಮಾಡು ಕಡ್ಡಿ) ಯಿಂದ ಚಾಸಾ-1 ರವರ ಎಡ ತಲೆಗೆ, ಮುಖಕ್ಕೆ ಮತ್ತು ಎಡಭಾಗದ ಮಂಡಿಗೆ ಸ್ವ-ಇಚ್ಛೆಯಿಂದ ಹಲ್ಲೆ ಮಾಡಿ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಐದನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 1 ನೇ ಆರೋಪಿಯಾದ ನೀವು ಮಾರಕಾಯುಧವಾದ ಅಲ್ಲೇ ಮೆರಕಡ್ಡಿ (ಗ್ರಾಮೀಣ ಭಾಷೆಯಲ್ಲಿ ಒಕ್ಕಣೆ ಮಾಡು ಕಡ್ಡಿ) ಯಿಂದ ಚಾಸಾ-1 ರವರ ಎಡಗೈಗೆ ಸ್ವ-ಇಚ್ಛೆಯಿಂದ ಹಲ್ಲೆ ಮಾಡಿ ತೀವ್ರ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 326 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳಾದ ನೀವು ಚಾಸಾ-1 ರವರನ್ನು ತಮ್ಮ ಹೊಸ ಮನೆಗೆ ಕರೆದುಕೊಂಡು ಹೋಗಿ ಮನೆಯ ಕೊಠಡಿಯಲ್ಲಿ ಚಾಸಾ-1 ರವರನ್ನು ದಿನಾಂಕ 04.01.2021 ರಿಂದ 09.01.2021 ರವರೆಗೆ ಅಕ್ರಮ ಬಂಧನದಲ್ಲಿಟ್ಟಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 343 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಪ್ರಶ್ನೆ:1- ಈ ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ದೋಷಾರೋಪಣೆಯನ್ನು ಅರ್ಥಮಾಡಿಕೊಂಡಿರುವಿರಾ?

1 ನೇ ಆರೋಪಿ ಉತ್ತರಃ　　　　3 ನೇ ಆರೋಪಿ ಉತ್ತರಃ

2 ನೇ ಆರೋಪಿ ಉತ್ತರಃ

ಪ್ರಶ್ನೆ:2- ಸದರಿ ಆರೋಪಣೆಗಳನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೋ?

1 ನೇ ಆರೋಪಿ ಉತ್ತರಃ　　　　3 ನೇ ಆರೋಪಿ ಉತ್ತರಃ

2 ನೇ ಆರೋಪಿ ಉತ್ತರಃ

(ಆರೋಪಿತರಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ದೋಷಾರೋಪಣೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿತರು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತ್ತೆಂದು ದೃಢೀಕರಿಸಿರುತ್ತೇನೆ.)

ದಿನಾಂಕಃ 18.01.2025.

(ಸತೀಶ. ಕೆ.ಜಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ನಂಜನಗೂಡು.